**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ಎಲ್.ಭೋಜೇಗೌಡ ಇವರು ನಿಯಮ-72 ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ:**

*********

**ಪ್ರಶ್ನೆ:**

ಆರ್.ಆರ್.ಸಿ ಪ್ರಕರಣಗಳಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಜಿಲ್ಲಾಧಿಕಾರಿಗಳಿಗೆ ರಾಜಧನ ವಸೂಲಿ ಮಾಡಲು ಇಲಾಖೆಯಿಂದ ಸೂಚಿಸಿದ್ದರೂ ಸಹ ಈವರೆಗೂ ಜಿಲ್ಲಾಧಿಕಾರಿಗಳಿಂದ ಸಕಾಲದಲ್ಲಿ ವಸೂಲಾತಿ ಆಗದೇ ಇರುವುದು ದುರದೃಷ್ಟಕರ. ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಅನಧಿಕೃತ ಗಣಿಗಾರಿಕೆ ಹಾಗೂ ಒತ್ತುವರಿ ಸಂಬಂಧ ಸಾಕಷ್ಟು ಮೊತ್ತದ ದಂಡವನ್ನು ವಸೂಲಾತಿ ಮಾಡದೇ ಇರುವುದರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತಿರುವ ಕುರಿತು ಗಣಿ ಮತ್ತು ಭೂವಿಜ್ಞಾನ ಇಲಾಖೆ ಸಚಿವರ ಗಮನ ಸೆಳೆದಿರುತ್ತಾರೆ.

**ಉತ್ತರ:**

ಎಂ.ಎಂ (ಡಿ&ಆರ್) ಆಕ್ಟ್ 1957ರ ಕಲಂ-25 ರನ್ವಯ ಮುಖ್ಯ ಖನಿಜ ಗಣಿ ಗುತ್ತಿಗೆಗಳಿಗೆ ಸಂಬಂಧಿಸಿದ ಬಾಕಿಯನ್ನು ಭೂ ಕಂದಾಯ ಬಾಕಿ ಎಂದು ಪರಿಗಣಿಸಿ ವಸೂಲಾತಿಗಾಗಿ ಆರ್.ಆರ್.ಸಿ. ಜಾರಿ ಮಾಡಲು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಶಿಫಾರಸ್ಸು ಸಲ್ಲಿಸಲು ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿದೆ.

ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ರ ನಿಯಮ-3 ರನ್ವಯ ಉಪಖನಿಜ ಗಣಿ ಗುತ್ತಿಗೆಗಳನ್ನು ಮಂಜೂರು ಮಾಡಲು ಅವಕಾಶವಿದೆ. ನಿಯಮ-36 ರನ್ವಯ ಗುತ್ತಿಗೆದಾರರು ಉತ್ಪಾದನೆ ಮಾಡಿ ರವಾನೆ ಮಾಡುವ ಪ್ರಮಾಣಕ್ಕೆ ರಾಜಧನ **(Royalty)** ಪಾವತಿಸಬೇಕಾಗಿದೆ. ಗಣಿಗಾರಿಕೆ ನಡೆಸದೇ ಇರುವ ಗುತ್ತಿಗೆದಾರರು ಸ್ಥಿರಬಾಡಿಗೆ **(Dead Rent)** ಪಾವತಿಸಬೇಕಾಗಿದೆ. ಖನಿಜವನ್ನು ಸಾಗಾಣಿಕೆ ಮಾಡುವ ಸಂದರ್ಭದಲ್ಲಿ ಗುತ್ತಿಗೆದಾರರು ನಿಯಮಾನುಸಾರ ಮುಂಗಡ ರಾಜಧನವನ್ನು ಪಾವತಿಸಿ ಖನಿಜ ರವಾನೆ ಪರವಾನಿಗೆಯನ್ನು ಪಡೆದು ಖನಿಜ ಸಾಗಾಣಿಕೆ ಮಾಡಬೇಕಾಗುತ್ತದೆ. ರಾಜಧನ, ಸ್ಥಿರಬಾಡಿಗೆ, ದಂಡ ಅಥವಾ ಸರ್ಕಾರಕ್ಕೆ ಪಾವತಿಸಬೇಕಾದ ಇತರೆ ಬಾಕಿಗಳನ್ನು ಗುತ್ತಿಗೆದಾರರು ನಿಗದಿತ ಅವಧಿಯೊಳಗೆ ಪಾವತಿಸಲು ವಿಫಲರಾದಲ್ಲಿ, ಅವರಿಗೆ ನೋಟೀಸ್ ಜಾರಿ ಮಾಡಿ ಸೂಕ್ತ ಅವಕಾಶ ನೀಡಿದ ನಂತರ ನಿಯಮ-39 ರನ್ವಯ ಗುತ್ತಿಗೆ ರದ್ದುಪಡಿಸಲು ಮತ್ತು ಬಾಕಿ ಮೊತ್ತವನ್ನು ಭೂ ಕಂದಾಯ ಬಾಕಿಯಂತೆ ವಸೂಲು ಮಾಡಲು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಶಿಫಾರಸ್ಸು ಸಲ್ಲಿಸಲು ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿದೆ. ಅದರಂತೆ ಉಪಖನಿಜಗಳ ಮೇಲಿನ ಬಾಕಿ ವಸೂಲಾತಿಗಾಗಿ ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ ಆರ್.ಆರ್.ಸಿ ಜಾರಿ ಮಾಡಲು ಶಿಫಾರಸ್ಸು ಮಾಡಿ ಪತ್ರ ಬರೆದು ಕೋರಲಾಗಿದ್ದು, ಕಂದಾಯ ಇಲಾಖೆಯಿಂದ RRC ನಿಯಮಾವಳಿಗಳನ್ವಯ ಕ್ರಮ ವಹಿಸಲಾಗುತ್ತದೆ.

**ಅಕ್ರಮ ಗಣಿಗಾರಿಕೆ, ದಾಸ್ತಾನು ಮತ್ತು ಸಾಗಾಣಿಕೆ ನಿಯಂತ್ರಿಸಲು ಕೈಗೊಂಡ ಕ್ರಮಗಳ ವಿವರ:-**

- ಅಧಿಸೂಚನೆ ಸಂಖ್ಯೆ: ಸಿಐಅ 21 ಎಂಎಂಎನ್ (2) 2014 ದಿನಾಂಕ:21-01-2014 ರಂತೆ ಗಣಿ ಮತ್ತು ಖನಿಜ (ಅಭಿವೃದ್ಧಿಮತ್ತುನಿಯಂತ್ರಣ) ಕಾಯ್ದೆ 1957ರ ಕಲಂ 21 ಮತ್ತು 22ರಡಿ ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮ-43 ಮತ್ತು 46 ರಂತೆ ಅನಧಿಕೃತ ಗಣಿಗಾರಿಕೆ, ಸಾಗಾಣಿಕೆ ಮತ್ತು ದಾಸ್ತಾನು ವಿರುದ್ಧ ಕ್ರಮವಹಿಸಲು, ಕಂದಾಯ, ಅರಣ್ಯ,ಪೋಲೀಸ್ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಿದೆ.

- ಅನಧಿಕೃತ ಕಲ್ಲುಗಣಿಗಾರಿಕೆ / ಸಾಗಾಣಿಕೆಯನ್ನು ನಿಯಂತ್ರಿಸಲು ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯಿಂದ ರಾಜ್ಯದಲ್ಲಿ ಆಯಾಕಟ್ಟಿನ ಪ್ರದೇಶಗಳಲ್ಲಿ ತನಿಖಾ ಠಾಣೆಗಳನ್ನು ತೆರೆದು ಕಾರ್ಯನಿರ್ವಹಿಸುತ್ತಿದ್ದು, ಅನಧಿಕೃತ ಕಲ್ಲು ಗಣಿಗಾರಿಕೆ, ದಾಸ್ತಾನು ಮತ್ತು ಸಾಗಾಣಿಕೆಯನ್ನು ನಿಯಂತ್ರಿಸಲಾಗುತ್ತಿದೆ.
- ರಾಜ್ಯದಲ್ಲಿ ಮಂಜೂರು ಮಾಡಿರುವ ಕಲ್ಲುಗಣಿಗುತ್ತಿಗೆ ಪ್ರದೇಶಗಳನ್ನು ಡ್ರೋಣ್ / ಡಿಜಿಪಿಎಸ್ ಸರ್ವೆ ಕೈಗೊಂಡು ಒತ್ತುವರಿ ಗಣಿಗಾರಿಕೆ ಕಂಡು ಬಂದ ಪ್ರಕರಣಗಳಲ್ಲಿ ವರದಿಯಂತೆ ನಿಯಮಾನುಸಾರ ಕ್ರಮಕೈಗೊಳ್ಳಲಾಗಿದೆ.
- Integrated Lease Management System (ILMS) version-II ಜಾರಿಗೊಳಿಸಲಾಗುತ್ತಿದ್ದು, ಅನಧಿಕೃತ ಖನಿಜ ಸಾಗಾಣಿಕೆಯನ್ನು ತಡೆಗಟ್ಟಲು ಖನಿಜ ಸಾಗಾಣಿಕಾ ವಾಹನಗಳಿಗೆ GPS ಅಳವಡಿಸಿ ಕೇಂದ್ರೀಕೃತವಾಗಿ ನಿಗಾವಹಿಸಲು ತಂತ್ರಾಂಶ ರೂಪಿಸಲಾಗಿದೆ.
- ಮಂಜೂರಾದ ಗಣಿ/ಕಲ್ಲುಗಣಿ ಗುತ್ತಿಗೆ ಪ್ರದೇಶಗಳನ್ನು ಹೊರತುಪಡಿಸಿ ಗುತ್ತಿಗೆ ಪ್ರದೇಶದ ಹೊರಭಾಗದಲ್ಲಿ ಒತ್ತುವರಿ ಮಾಡಿ ಗಣಿಗಾರಿಕೆಯನ್ನು ನಡೆಸುವುದನ್ನು ತಡೆಗಟ್ಟಲು Geo-fencing ಅಳವಡಿಸಿ ನಿರ್ವಹಿಸಲು ಕ್ರಮ ಕೈಗೊಳ್ಳಲಾಗಿದೆ.
- ಅನಧಿಕೃತ ಖನಿಜ ಸಾಗಾಣಿಕೆಯನ್ನು ಪತ್ತೆ ಹಚ್ಚಲು ಖನಿಜ ರವಾನೆ ಪರವಾನಿಗೆ ಕಡ್ಡಾಯಗೊಳಿಸಲಾಗಿದ್ದು, ಖನಿಜ ರವಾನೆ ಪರವಾನಿಗೆ ವಿಶೇಷ ರಕ್ಷಣಾತ್ಮಕ ಹಾಳೆಯಲ್ಲಿ ವಿತರಿಸಲಾಗುತ್ತಿದೆ
- ಅನಧಿಕೃತ ಗಣಿಗಾರಿಕೆಯನ್ನು ತಡೆಗಟ್ಟಲು ಖನಿಜ ರಕ್ಷಣಾ ಪಡೆ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗಿದೆ.
- ರಾಜ್ಯದಲ್ಲಿ ಪ್ರಸ್ತುತ ಸಾಲಿನಲ್ಲಿ (ಜುಲೈ-2026ರ ಅಂತ್ಯದವರೆಗೆ) ನಿಯಮಗಳಂತೆ ಅಕ್ರಮ ಗಣಿ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಪ್ರಕರಣಗಳನ್ನು ಪತ್ತೆ ಹಚ್ಚಿದ್ದು, ಸದರಿಯವರ ವಿರುದ್ಧ ಎಂ.ಎಂ. (ಡಿ & ಆರ್) ಕಾಯ್ದೆ -1957 ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮಗಳಂತೆ ಒಟ್ಟು – 535 ಮೊಕದ್ದಮೆಗಳನ್ನು ದಾಖಲಿಸಿದ್ದು, ರೂ.1210.57 ಲಕ್ಷಗಳ ದಂಡವನ್ನು ವಿಧಿಸಿ ಸಂಗ್ರಹಿಸಲಾಗಿದೆ.

**ಸಂಖ್ಯೆ**: ಸಿಐ-ಎಂಎಂಎನ್/332/2025

**(ಎಸ್.ಎಸ್. ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.